# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪೌರಕಾರ್ಮಿಕರ/ ಸಫಾಯಿ ಕರ್ಮಚಾರಿ/ ಮ್ಯಾನ್ಯುಯಲ್ ಸ್ಕ್ಯಾವೆಂಜರ್/ ಸ್ಮಶಾನ ಕಾರ್ಮಿಕರ/ ದೇವದಾಸಿ ಈ ಸಮುದಾಯಗಳ ಮಕ್ಕಳಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ ವಿಶೇಷ ದಾಖಲಾತಿ ಮೂಲಕ ದಾಖಲಾತಿ ಮಾಡಿಕೊಳ್ಳುವ ಬಗ್ಗೆ.

**ಓದಲಾಗಿದೆ: 1)** ಸರ್ಕಾರದ ಆದೇಶ ಸಂಖ್ಯೆ: ಸಕಇ 94 ಮೊದೇಶಾ 2020, ದಿನಾಂಕ:19.06.2021.

**2)** ಸರ್ಕಾರದ ಆದೇಶ ಸಂಖ್ಯೆ: ಸಕಇ 399 ಎಂಡಿಎಸ್ 2022, ದಿನಾಂಕ:18.07.2022.

**3)** ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ಸಕಇ 232 ಎಂಡಿಎಸ್ 2021, ದಿನಾಂಕ: 28.12.2022.

*******

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ:19.06.2021ರ ಆದೇಶದಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿರುವ 826 ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ/ ಡಾ|| ಬಿ.ಆರ್ ಅಂಬೇಡ್ಕರ್/ ಅಟಲ್ ಬಿಹಾರ್ ವಾಜಪೇಯಿ/ ಶ್ರೀಮತಿ ಇಂದಿರಾ ಗಾಂಧಿ/ ಏಕಲವ್ಯ ಮಾದರಿ ವಸತಿ ಶಾಲೆ / ಕಾಲೇಜುಗಳ ಪೈಕಿ 800 ವಸತಿ ಶಾಲೆಗಳಿಗೆ 6ನೇ ತರಗತಿಗೆ ಲಭ್ಯವಾಗುವ ಸೀಟುಗಳಿಗೆ ಅನುಗುಣವಾಗಿ ಪ್ರವೇಶ ಕಲ್ಪಿಸಲು ನಿಬಂಧನೆ, ಷರತ್ತು, ಮಾರ್ಗಸೂಚಿಗಳನ್ನೊಳಗೊಂಡಂತೆ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2)ರ ದಿನಾಂಕ:18.07.2022 ರ ಆದೇಶದಲ್ಲಿ 2022-23 ನೇ ಸಾಲಿನಲ್ಲಿ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಸಫಾಯಿ ಕರ್ಮಚಾರಿಗಳ ಮಕ್ಕಳಿಗೆ ಮೀಸಲಾತಿ ನಿಗಧಿಪಡಿಸಿರುವಷ್ಟು ಭರ್ತಿಯಾಗದೆ ಖಾಲಿ ಉಳಿದಿರುವ ಸೀಟುಗಳಿಗೆ ಜಿಲ್ಲಾ, ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳಲ್ಲಿ ವ್ಯಾಪಕ ಪ್ರಚಾರ ನೀಡಿ, ಸ್ಥಳೀಯವಾಗಿ ಅರ್ಜಿ ಆಹ್ವಾನಿಸಿ, ವಸತಿ ಶಾಲಾ ಮಟ್ಟದಲ್ಲಿ ಆಯಾ ಪ್ರಾಂಶುಪಾಲರುಗಳಿಂದ ಪ್ರವೇಶ ಪರೀಕ್ಷೆ ನಡೆಸಿ ಸಫಾಯಿ ಕರ್ಮಚಾರಿಗಳ ಮಕ್ಕಳನ್ನು ದಾಖಲು ಮಾಡಿಕೊಳ್ಳಲು ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3)ರ ಸೇರ್ಪಡೆ ಆದೇಶ ದಿನಾಂಕ:28.12.2022 ರಲ್ಲಿ ಸರ್ಕಾರದ ಆದೇಶ ಸಂಖ್ಯೆ: ಸಕಇ 94 ಮೊದೇಶಾ 2020, ದಿನಾಂಕ:19.06.2021 ರ ಆದೇಶದ ನಿಬಂಧನೆ / ಷರತ್ತು / ಮಾರ್ಗಸೂಚಿಗಳ ಸಂಖ್ಯೆ; 03 ರ ವಿಶೇಷ ವರ್ಗಗಳಿಗೆ ಸ್ಥಾನ ಹಂಚಿಕೆ ಶೀರ್ಷಿಕೆಯ ಕ್ರಮ ಸಂಖ್ಯೆ :6 ರ ನಂತರ ಈ ಕೆಳಕಂಡ ಅಂಶವನ್ನು ಸೇರಿಸಿ ಓದಿಕೊಳ್ಳತಕ್ಕದ್ದೆಂದು ಸೇರ್ಪಡೆ ಆದೇಶ ಹೊರಡಿಸಲಾಗಿದೆ.

| | | |
|---|---|---|
| 7. | ಸ್ಮಶಾನ ಕಾರ್ಮಿಕ ಮಕ್ಕಳಿಗೆ | ಶೇ 2 ರಷ್ಟು |

ಮಾರ್ಗಸೂಚಿಗಳ ಸಂಖ್ಯೆ; 03 ರ ವಿಶೇಷ ವರ್ಗಗಳಿಗೆ ಸ್ಥಾನ ಹಂಚಿಕೆ ಶೀರ್ಷಿಕೆಯ ಕ್ರಮ ಸಂಖ್ಯೆ : 4 ರ ವಿಶೇಷ ವರ್ಗಗಳ ಅರ್ಥ ಎಂಬುದರಲ್ಲಿ ಈ ಕೆಳಕಂಡ ಅಂಶವನ್ನು ಸೇರಿಸಿ ಓದಿಕೊಳ್ಳತಕ್ಕದ್ದು .

4.1. ಸ್ಮಶಾನ ಕಾರ್ಮಿಕ: ಸರ್ಕಾರ ನಿಗದಿಪಡಿಸಿರುವ ನಿಯಮಾನುಸಾರವಾಗಿ ಸಂಬಂಧಪಟ್ಟ ಪಟ್ಟಣ ಪಂಚಾಯತಿ/ ನಗರಸಭೆ/ಮಹಾನಗರ ಪಾಲಿಕೆಯ ಮುಖ್ಯಾಧಿಕಾರಿ/ಪೌರಾಯುಕ್ತರು/ ಆಯುಕ್ತರಿಂದ ನಿಗಧಿತ ನಮೂನೆಯ ಸ್ಮಶಾನ ಕಾರ್ಮಿಕ ಪ್ರಮಾಣ ಪತ್ರ ಪಡೆದಿರುವವರು.

ಮಾರ್ಗಸೂಚಿಗಳ ಸಂಖ್ಯೆ; 08 ರ ಪ್ರವೇಶ ಪರೀಕ್ಷೆ ವಿಧಾನ ಶೀರ್ಷಿಕೆಯಡಿ ಕ್ರಮ ಸಂಖ್ಯೆ : 6 ರ ನಂತರ ಈ ಕೆಳಕಂಡ ಅಂಶವನ್ನು ಸೇರಿಸಿ ಓದಿಕೊಳ್ಳತಕ್ಕದ್ದು .

7. ಈ ವರ್ಗದ ಮಕ್ಕಳಿಗೆ ಪ್ರವೇಶ ಪರೀಕ್ಷೆಯಿಲ್ಲದೇ ವಸತಿ ಶಾಲೆಗೆ ದಾಖಲಾತಿ ನೀಡುವುದು.

2022-23ನೇ ಶೈಕ್ಷಣಿಕ ಸಾಲಿನಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಪೌರಕಾರ್ಮಿಕರ/ ಸಫಾಯಿ ಕರ್ಮಚಾರಿ/ ಮ್ಯಾನ್ಯುಯಲ್ ಸ್ಕ್ಯಾವೆಂಜರ್/ ಸ್ಮಶಾನ ಕಾರ್ಮಿಕರ/ ದೇವದಾಸಿ ಈ ಸಮುದಾಯಗಳ ಮಕ್ಕಳಿಗೆ ಮೀಸಲಾತಿ ನಿಗದಿಪಡಿಸಿರುವಷ್ಟು ಭರ್ತಿಯಾಗದೆ ಖಾಲಿ ಉಳಿದಿದ್ದು, ಈ ಸಮುದಾಯದ ಶೈಕ್ಷಣಿಕ ಅಭಿವೃದ್ಧಿ ಕುಂಠಿತವಾಗುತ್ತದೆ. ಈ ಸಮುದಾಯದಲ್ಲಿನ ಮಾಹಿತಿ ಕೊರತೆಯೇ ಇದಕ್ಕೆ ಮುಖ್ಯ ಕಾರಣವಾದ್ದರಿಂದ, 2023-24 ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಪೂರ್ಣ ಪ್ರಮಾಣದ ಪ್ರವೇಶಾತಿಗೆ ಅವಕಾಶ ಕಲ್ಪಿಸುವ ದೃಷ್ಟಿಯಿಂದ ಸಾಮಾಜಿಕ ಮಾಧ್ಯಮಗಳ ಮೂಲಕ ವ್ಯಾಪಕ ಪ್ರಚಾರ ನೀಡಿ, ಪ್ರವೇಶ ಪರೀಕ್ಷೆಯಿಲ್ಲದೆ ಯಾವುದೇ ವಸತಿ ಶಾಲೆಗಳಿಗೆ ಸದರಿ ಸಮುದಾಯದ ಮಕ್ಕಳಿಗೆ ಶೈಕ್ಷಣಿಕವಾಗಿ ಉನ್ನತೀಕರಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಅನುಮೋದನೆ ನೀಡಿ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಸಕಇ 399 ಎಂಡಿಎಸ್ 2022, ಬೆಂಗಳೂರು, ದಿನಾಂಕ:03.02.2023</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಿಗೆ ಪೌರಕಾರ್ಮಿಕರ/ ಸಫಾಯಿ ಕರ್ಮಚಾರಿ/ ಮ್ಯಾನ್ಯುಯಲ್ ಸ್ಕ್ಯಾವೆಂಜರ್/ ಸ್ಮಶಾನ ಕಾರ್ಮಿಕರ/ ದೇವದಾಸಿ ಈ ಸಮುದಾಯದ ಮಕ್ಕಳಿಗೆ 2023-24 ನೇ ಸಾಲಿನ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶ ಪರೀಕ್ಷೆಯಿಂದ ವಿನಾಯಿತಿ ನೀಡಿ ಈ ಕೆಳಕಂಡ ಷರತ್ತಿಗೊಳಪಟ್ಟು ಅನುಮೋದನೆ ನೀಡಿ ಆದೇಶಿಸಿದೆ.

**<u>ಷರತ್ತುಗಳು</u>**

1) ಸಂಬಂಧ ಪಟ್ಟ ಶಾಲಾ/ ಕಾಲೇಜು ಪ್ರಾಂಶುಪಾಲರು ಆಧಾರ್ ಕಾರ್ಡ್ / ಆದಾಯ ಮತ್ತು ಜಾತಿ ಪ್ರಮಾಣ ಪತ್ರವನ್ನು ಪರಿಶೀಲಿಸಿ, ದೃಢೀಕರಿಸಿಕೊಳ್ಳುವುದು.

----3

2) ಸಂಬಂಧ ಪಟ್ಟ ಪ್ರಾಧಿಕಾರಗಳಿಂದ ಪಡೆದ ಗುರುತಿನ ಚೀಟಿಯನ್ನು ಖಚಿತಪಡಿಸಿಕೊಳ್ಳುವುದು.

3) ಯಾವುದೇ ವಸತಿ ಶಾಲೆಗಳಿಗೆ ಪ್ರವೇಶ ಕಲ್ಪಿಸಲು ಜಿಲ್ಲಾ, ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸ್ಥಳೀಯವಾಗಿ ಅರ್ಧ ಪುಟದ ವ್ಯಾಪಕ ಪ್ರಚಾರ ನೀಡಿ, ಪೋಷಕರಿಗೆ ತಮ್ಮ ಮಕ್ಕಳನ್ನು ಹತ್ತಿರದ ವಸತಿ ಶಾಲೆಗೆ ದಾಖಲು ಮಾಡುವಂತೆ ಶಿಕ್ಷಣದ ಬಗ್ಗೆ ಅರಿವು ಮೂಡಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶಂಭುಲಿಂಗಯ್ಯ)
ಸರ್ಕಾರದ ಅಪರ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

**ಇವರಿಗೆ:-**

1. ಮಹಾಲೇಖಪಾಲರು, (ಎ & ಇ ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
5. ಎಲ್ಲಾ ಜಿಲ್ಲಾಧಿಕಾರಿಗಳು.
6. ಎಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್.
7. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
8. ಎಲ್ಲಾ ಜಿಲ್ಲೆಗಳ ಉಪ/ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
9. ಎಲ್ಲಾ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
10. ಖಜನಾಧಿಕಾರಿ, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಗಳು:**

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ.